ಬಂಟ್ವಾಳ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ

ಸಿಸಿ ನಂ. 92/2022

ಪ್ರಾಸಾ : 03

ಚಾಸಾ : 04

| | | |
|---|---|---|
| ಹೆಸರು | : | ಪಿ ಮಹಮ್ಮದ್ |
| ತಂದೆಯ ಹೆಸರು | : | ಮೊಹಿದ್ದೀನಬ್ಬ |
| ಪ್ರಾಯ | : | 71 ವರ್ಷ |
| ಉದ್ಯೋಗ | : | ಅಂಗಡಿ |
| ವಾಸಸ್ಥಳ | : | ತಲಪಾಡಿ, ಬಿ ಮೂಡ ಗ್ರಾಮ |

ದಿಃ 22/03/2025ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಭೋದಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

1. ಪ್ರಕರಣದ ಬಗ್ಗೆ ನನಗೇನೂ ಗೊತ್ತಿಲ್ಲ. ನಾನು ಯಾವುದೇ ಅಪಘಾತವನ್ನು ನೋಡಿಲ್ಲ. ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿ ಸಹಿಯನ್ನು ತನ್ನದೆಂದು ನೋಡಿ ಗುರುತಿಸಿದ ಮೇರೆಗೆ ಸ್ಥಳ ಮಹಜರನ್ನು ಮತ್ತು ನಕಾಶೆಯನ್ನು ನಿಪಿ-11 ಮತ್ತು ನಿಪಿ-12 ಎಂದು, ಸಹಿಗಳನ್ನು ನಿಪಿ-11(ಎ) ಮತ್ತು ನಿಪಿ-12(ಎ) ಎಂದು ಗುರುತಿಸಲಾಯಿತು. ಪೋಲಿಸರು ನನ್ನ ಸಮಕ್ಷಮ ಯಾವುದೇ ಮಹಜರು ಜರುಗಿಸಿ ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ. ನಿಪಿ-11 ಮತ್ತು ನಿಪಿ-12 ರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ಈ ಹಿಂದೆ ನೋಡಿರುವುದಿಲ್ಲ. ನಿಪಿ-1 ರಿಂದ ನಿಪಿ-7 ರ ಪೋಟೋದಲ್ಲಿ ಕಾಣುವ ವಾಹನಗಳನ್ನು ಸಾಕ್ಷಿ ನೋಡಿ ಗುರುತಿಸಿರುವುದಿಲ್ಲ.

(ಈ ಹಂತದಲ್ಲಿ ಮಾನ್ಯ ಎ ಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಎಪಿಪಿಯವರಿಂದಃ -

2. ದಿ. 02.09.2021 ರಂದು ಮಧ್ಯಾಹ್ನ 2.15 ಗಂಟೆಗೆ ಬಂಟ್ವಾಳ ತಾಲೂಕು ಬಿ ಮೂಡ ಗ್ರಾಮದ ತಲಪಾಡಿ ಮಸೀದಿ ಬಳಿ ಮಂಗಳೂರು-ಬೆಂಗಳೂರು ಹೆದ್ದಾರಿಯಲ್ಲಿ

ಆರೋಪಿಯು ಕೆಎ-19-ಎಬಿ-6250 ಟಿಪ್ಪರ್ ಲಾರಿಯನ್ನು ಬಿಸಿರೋಡ್ ಕಡೆಯಿಂದ ದುಡುಕುತನ ಮತ್ತು ನಿರ್ಲಕ್ಷತನದಿಂದ ದ್ವಿಪದ ರಸ್ತೆಯ ಹೆದ್ದಾರಿಯ ಬದಿಬದಿಯ ಹಳೆಯ ರಸ್ತೆಗೆ ಚಲಾಯಿಸಿ ಮಂಗಳೂರು ಕಡೆಯಿಂದ ಬಿಸಿರೋಡ್ ಕಡೆಗೆ ಬರುತ್ತಿದ್ದ ಚಾಸಾ-2 ರವರು ಚಲಾಯಿಸಿಕೊಂಡು ಬರುತ್ತಿದ್ದ ಕೆಎ-19-ಇಹೆಚ್-7009 ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದು ಅಪಘಾತ ಉಂಟಾಗಿರುತ್ತದೆ ಅದರ ಪರಿಣಾಮವಾಗಿ ಚಾಸಾ-2 ರವರಿಗೆ ತೀರ್ವ ತರಹ ಗಾಯಗಳಾಗಿರುತ್ತದೆ ಮತ್ತು ಸಹ ಸವಾರ ಯುನಿಟ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಅಪಘಾತವನ್ನು ನಾನು ಕಣ್ಣಾರೆ ನೋಡಿರುತ್ತೇನೆ ಎಂದರೆ ಸರಿಯಲ್ಲ.

3. ದಿ. 03.09.2021 ರಂದು ಪೋಲಿಸರು ಸ್ಥಳಕ್ಕೆ ಬಂದಿದ್ದಾಗ ಅಪಘಾತ ಸ್ಥಳವನ್ನು ಚಾಸಾ-1 ರವರು ತೋರಿಸಿಕೊಟ್ಟಂತೆ ಸ್ಥಳದಲ್ಲಿದ್ದ ಟಿಪ್ಪರ್ ಲಾರಿ ಮತ್ತು ದ್ವಿಚಕ್ರ ವಾಹನವನ್ನು ಪೋಲಿಸರು ವಶಕ್ಕೆ ಪಡೆದು ಮಧ್ಯಾಹ್ನ 2.00 ರಿಂದ 3.00 ರವರೆಗೆ ಜರುಗಿಸಿದ ಮಹಜರು ಮತ್ತು ನಕಾಶೆಗೆ ಪಂಚರಾಗಿ ನಾನು ಚಾಸಾ-9 ಮತ್ತು ಚಾಸಾ-1 ಸಹಿ ಹಾಕಿರುತ್ತೇವೆ ಎಂದರೆ ಸರಿಯಲ್ಲ. ನನಗೆ ಈಗ ಓದಿ ಹೇಳಿದಂತೆ ತನಿಖಾಧಿಕಾರಿಯ ಮುಂದೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿ ನಿರಾಕರಿಸಿದ ಹೇಳಿಕೆಯ ಭಾಗವನ್ನು ನಿಪಿ-13 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಮತ್ತು ಆರೋಪಿತರೊಂದಿಗೆ ರಾಜಿ ಮಾಡಿಕೊಂಡು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿತರ ಪರ: ಶ್ರೀ ವಕೀಲರಿಂದ:ಇರುವುದಿಲ್ಲ

ಮರುವಿಚಾರಣೆ: ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,
ಬಂಟ್ವಾಳ